ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 312(2301)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ವಿಷಯ : ರಾಜ್ಯದ ತೋಟಗಾರಿಕಾ ಬೆಳೆಗಳ ಕುರಿತು

(ಅ) ಸರ್ಕಾರವು ಯಾವ ಯಾವ ಬೆಳೆಗಳನ್ನು ತೋಟಗಾರಿಕಾ ಬೆಳೆಗಳೆಂದು ಪರಿಗಣಿಸಿದೆ; ರಾಜ್ಯದಲ್ಲಿ ತೋಟಗಾರಿಕೆ ಬೆಳೆ ಉತ್ಪಾದಿಸುವ ಪ್ರದೇಶದ ವಿಸ್ತೀರ್ಣವೆಷ್ಟು; ಈ ಪ್ರದೇಶಗಳಲ್ಲಿ ಯಾವ ಯಾವ ಬೆಳೆಗಳನ್ನು ಎಷ್ಟು ಪ್ರಮಾಣದಲ್ಲಿ ಉತ್ಪಾದಿಸಲಾಗುತ್ತಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ತೋಟಗಾರಿಕಾ ಇಲಾಖೆಯಿಂದ ರೈತರ ಅನುಕೂಲಕ್ಕಾಗಿ ರೂಪಿಸಿರುವ ಯೋಜನೆಗಳು ಯಾವುವು; ಈ ಯೋಜನೆಗಳಿಗಾಗಿ ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು; ಮತ್ತು ಖರ್ಚಾದ ಅನುದಾನವೆಷ್ಟು; ಈ ಯೋಜನೆಗಳ ಫಲಾನುಭವಿಗಳ ವಿವರಗಳೊಂದಿಗೆ ಯೋಜನೆವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು;

(ಇ) ರೈತರು ಬೆಳೆಯುತ್ತಿರುವ ತೋಟಗಾರಿಕಾ ಬೆಳೆಗಳ ಸಂರಕ್ಷಣೆಗಾಗಿ ರಾಜ್ಯದಲ್ಲಿ ಶೀಥಲೀಕರಣ ಸಂಗ್ರಹಗಾರಗಳ ನಿರ್ಮಾಣ ಮಾಡಲಾಗಿದೆಯೇ? (ವಿವರ ನೀಡುವುದು)